ಜೆಎಸ್‌ಎಸ್ ಮಹಾವಿದ್ಯಾಪೀಠ
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
ಊಟಿರಸ್ತೆ, ಮೈಸೂರು-570 025, ಕರ್ನಾಟಕ

☎ 0821-2548236 & 2548380 Fax: 0821-2548238 E-mail: jssautonomous@gmail.com

ಸಂಖ್ಯೆ: ಜೆಎಸ್‌ಎಸ್‌ಸಿಎಂ/ /2016-74 ದಿನಾಂಕ: 05-08-2016

## ಪ್ರಕಟಣೆಯ ಕೃಪೆಗಾಗಿ

## ಕ್ರೀಡಾಚಟುವಟಿಕೆಗಳಿಂದ ಜೀವನೋತ್ಸಾಹ ಸಾಧ್ಯ

ಡಾ. ಎಂ. ಚಂದ್ರಕುಮಾರ್

ಮೈಸೂರು ನಗರದ ಬಿ.ಎನ್. ರಸ್ತೆಯಲ್ಲಿನ ಜೆಎಸ್‌ಎಸ್ ಪದವಿ ಹಾಗೂ ಪದವಿಪೂರ್ವ ಕಾಲೇಜಿನಲ್ಲಿ ದಿನಾಂಕ 05-08-2016ರಂದು ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಜನ್ಮಶತಮಾನೋತ್ಸವ ಹಾಗೂ ಕಾಲೇಜಿನ ಸುವರ್ಣ ಮಹೋತ್ಸವದ ಅಂಗವಾಗಿ ಅಂತರ ಕಾಲೇಜು ಪುರುಷರ ವಾಲಿಬಾಲ್ ಮತ್ತು ಬಾಲ್‌ಬ್ಯಾಡ್‌ಮಿಂಟನ್ ಹಾಗೂ ಮಹಿಳೆಯರ ಥ್ರೋಬಾಲ್ ಪಂದ್ಯಾವಳಿಯನ್ನು ಏರ್ಪಡಿಸಲಾಗಿತ್ತು. ಪಂದ್ಯಾವಳಿಯನ್ನು ಉದ್ಘಾಟಿಸಿದ ಮೈಸೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ವಿಭಾಗದ ಸಂದರ್ಶಕ ಪ್ರಾಧ್ಯಾಪಕರಾದ ಡಾ. ಎಂ. ಚಂದ್ರಕುಮಾರ್‌ರವರು ಮಾತನಾಡುತ್ತಾ, ನಮ್ಮ ಬದಲಾಗುತ್ತಿರುವ ಜೀವನ ಶೈಲಿಯಿಂದ ಅನೇಕ ಖಾಯಿಲೆಗಳು ಬರುತ್ತಿವೆ. ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ನಮ್ಮ ಆರೋಗ್ಯವನ್ನು ಸುಧಾರಿಸಿಕೊಳ್ಳಬಹುದು, ಅಲ್ಲದೆ, ಜೀವನದಲ್ಲಿ ಆರೋಗ್ಯ, ಸಂತೋಷ, ಉತ್ಸಾಹವನ್ನು ಪಡೆದುಕೊಳ್ಳಬಹುದು. ಆದುದರಿಂದ ದಿನಕ್ಕೆ ಕನಿಷ್ಠ ಒಂದು ಗಂಟೆಯಾದರು ಯಾವುದಾದರೂ ಕ್ರೀಡಾ ಚಟುವಟಿಕೆಯಲ್ಲಿ ಭಾಗವಹಿಸುವುದು ಸೂಕ್ತ. ಶಿಕ್ಷಣ ಸಂಸ್ಥೆಗಳು ಒದಗಿಸುವ ಕ್ರೀಡಾ ಸೌಲಭ್ಯಗಳನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಆಟೋಟ ಚಟುವಟಿಕೆಗಳು ಎಲ್ಲಾ ವಯೋಮಾನದವರಿಗೂ ಇರುತ್ತವೆ. ಕ್ರೀಡಾ ಚಟುವಟಿಕೆಗಳು ಆರೋಗ್ಯವಂತ ಜೀವನವನ್ನು ಮತ್ತು ಜೀವನಕ್ಕೆ ಶಿಸ್ತನ್ನು ನೀಡುತ್ತವೆ. ಆದುದರಿಂದ ಶಿಸ್ತುಬದ್ಧ ಜೀವನವನ್ನು ರೂಪಿಸಿಕೊಳ್ಳಲು ವಿದ್ಯಾರ್ಥಿಗಳು ಕ್ರೀಡಾಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದರು. ವಿದ್ಯಾರ್ಥಿಗಳ ಸರ್ವೋತೋಮುಖ ಬೆಳವಣಿಗೆಗೆ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳು ಅತ್ಯವಶ್ಯಕವೆಂದು ತಿಳಿಸಿದರು.

ಪಂದ್ಯಾವಳಿಯಲ್ಲಿ ಮೈಸೂರು ನಗರದ 15ಕ್ಕೂ ಹೆಚ್ಚು ಕಾಲೇಜುಗಳಿಂದ ನೂರಾರು ಸ್ಪರ್ಧಿಗಳು ಭಾಗವಹಿಸಿದ್ದರು.

ಕಾಲೇಜಿನ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕರಾದ ಶ್ರೀ ಟಿ. ಅರವಿಂದರವರು ಉಪಸ್ಥಿತರಿದ್ದ ಕಾರ್ಯಕ್ರಮದಲ್ಲಿ ಶ್ರೀಯುತ ವೃಷಬೇಂದ್ರರವರು ಪ್ರಾರ್ಥಿಸಿದರು. ಪದವಿ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎಂ. ಮಹದೇವಪ್ಪನವರು ಸ್ವಾಗತಿಸಿದರು. ಸುವರ್ಣ ಮಹೋತ್ಸವ ಸಮಿತಿ ಕಾರ್ಯದರ್ಶಿಗಳಾದ ಪ್ರೊ. ಡಿ.ಎಸ್. ಸದಾಶಿವಮೂರ್ತಿರವರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎಸ್. ಸೋಮಶೇಖರ್‌ರವರು ವಂದಿಸಿದರು. ಸಹಾಯಕ ಪ್ರಾಧ್ಯಾಪಕರಾದ ಶ್ರೀ ಎನ್. ಸಂತೋಷ್‌ಕುಮಾರ್‌ರವರು ಕಾರ್ಯಕ್ರಮ ನಿರೂಪಿಸಿದರು.

(ಪ್ರೊ. ಎಂ. ಮಹದೇವಪ್ಪ)
ಪ್ರಾಂಶುಪಾಲರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು-570 025.

ಗೆ
ಸಂಪಾದಕರು
_ _ _ _ _ _ _ _ _ _ _ _ _ _ _ _ _ _
_ _ _ _ _ _ _ _ _ _ _ _ _ _ _ _ _ _